ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 10-04-2017

# ಪತ್ರಿಕಾ ಆಮಂತ್ರಣ

**1. Karnataka Healthcare Summit 2017 - One-Day National Conference and Exposition**

**Inauguration:**

**K.R, Ramesh Kumar,**

**Minister for Health and Family Welfare**

**Date: 11-04-2017 Tuesday, Time: 9-30 a.m.**

**Place: The Lalit Ashok Hotel, Bangalore**

**2. ಪತ್ರಿಕಾಗೋಷ್ಠಿ:**

2017–18 ನೇ ಸಾಲಿನ ವಿದ್ಯುಚ್ಛಕ್ತಿ ದರ ಪರಿಷ್ಕರಣೆ ಕುರಿತಂತೆ ಕರ್ನಾಟಕ ವಿದ್ಯುತ್ ಪ್ರಸರಣಾ ನಿಗಮ, ವಿದ್ಯುತ್ ವಿತರಣಾ ಲೈಸೆನ್ಸ್‌ದಾರರು ಸಲ್ಲಿಸಿದ ಅರ್ಜಿಯ ಮೇಲಿನ ಆಯೋಗದ ಆದೇಶ ಪ್ರಕಟಣೆ ಕುರಿತು:

ದಿನಾಂಕ: 11–4–2017 ಮಂಗಳವಾರ, ಸಮಯ ಬೆಳಿಗ್ಗೆ 11–30 ಗಂಟೆಗೆ

ಸ್ಥಳ: ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ಸಭಾಂಗಣ,
6 ನೇ ಮಹಡಿ, ಮಹಾಲಕ್ಷ್ಮೀ ಛೇಂಬರ್ಸ್, ಬೆಂಗಳೂರು –01

3. <u>ಶಿವಶರಣೆ ವಚನಗಾರ್ತಿ ಅಕ್ಕಮಹಾದೇವಿ ಜಯಂತಿ ಹಾಗೂ 'ಅಕ್ಕಮಹಾದೇವಿ ರಾಜ್ಯ ಪ್ರಶಸ್ತಿ' ಪ್ರದಾನ ಸಮಾರಂಭ:</u>

<u>ಉದ್ಘಾಟನೆ:</u>

ಶ್ರೀಮತಿ ಉಮಾಶ್ರೀ, ಕನ್ನಡ ಮತ್ತು ಸಂಸ್ಕೃತಿ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವೆ

**ಮುಖ್ಯ ಅತಿಥಿಗಳು:**

**ಅನಂತಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರು.**

**ಕೆ.ಜೆ. ಜಾರ್ಜ್, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರು.**

**ಶ್ರೀಮತಿ ಜಿ. ಪದ್ಮಾವತಿ, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ. ಬೆಂಗಳೂರು**

**ದಿನಾಂಕ: 11-04-2017, ಮಂಗಳವಾರ, ಸಮಯ : ಅಪರಾಹ್ನ 12-00 ಗಂಟೆಗೆ**

**ಸ್ಥಳ : ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.**

# ಮಾಧ್ಯಮದವರ ಗಮನಕ್ಕೆ

## ಮಾಧ್ಯಮ ವರದಿಗಾರರಿಗೆ ಹವಾಮಾನ ಸಂಬಂಧಿತ ವಿಕೋಪಗಳ ಕುರಿತು ಕಾರ್ಯಾಗಾರ

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ಕರ್ನಾಟಕ ರಾಜ್ಯದ ಮಾಧ್ಯಮ ವರದಿಗಾರರಿಗೆ ಹವಾಮಾನ ಸಂಬಂಧಿತ ವಿಕೋಪಗಳ ಕುರಿತು ಮಾಹಿತಿ ಹಾಗೂ ಸಲಹೆಗಳ ಬಗ್ಗೆ ತಾಂತ್ರಿಕ ಮಾಹಿತಿ ಒದಗಿಸಲು ಏಪ್ರಿಲ್ 22 ರಂದು ಬೆಳಿಗ್ಗೆ 10.30 ಗಂಟೆಗೆ ಅರ್ಧ ದಿನದ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡಿದೆ.

ಇತ್ತೀಚಿನ ದಿನಗಳಲ್ಲಿ ಹವಾಮಾನದಲ್ಲಿ ಹಲವಾರು ವೈಪರೀತ್ಯಗಳುಂಟಾಗುತ್ತಿದ್ದು ಅದರಿಂದಾಗಿ ಸಾಮಾನ್ಯ ಜನಜೀವನದ ಮೇಲೆ ತೀವ್ರತರ ಪರಿಣಾಮಗಳಾಗುತ್ತಿರುವುದು ಕಂಡುಬಂದಿದೆ. ಈ ರೀತಿಯ ಹವಾಮಾನ ಸಂಬಂಧಿತ ವಿಕೋಪಗಳಿಂದಾಗುವ ಪರಿಣಾಮಗಳನ್ನು ತಗ್ಗಿಸಲು ಜನಸಾಮಾನ್ಯರಲ್ಲಿ ಅರಿವು ಮೂಡಿಸುವ ಅಗತ್ಯವಿದೆ. ನೈಸರ್ಗಿಕ ವಿಕೋಪಗಳ ಕುರಿತು ವೈಜ್ಞಾನಿಕ ಮಾಹಿತಿ ಮತ್ತು ಸಲಹೆಗಳನ್ನು ಜನಸಾಮಾನ್ಯರಿಗೆ ತಲುಪಿಸುವ ಕಾರ್ಯವನ್ನು ಮಾಧ್ಯಮಗಳು ಈಗಾಗಲೇ ಕೈಗೊಂಡಿದೆ. ಈ ಕಾರ್ಯವನ್ನು ಮತ್ತಷ್ಟು ಪರಿಣಾಮಕಾರಿಯಾಗಿಸಲು ಮಾಧ್ಯಮ ವರದಿಗಾರರುಗಳಿಗೆ ಇನ್ನಷ್ಟು ನಿಖರ ಮಾಹಿತಿ ಅಗತ್ಯವಿರುವುದು ಕಂಡುಬಂದಿದೆ.

ರಾಷ್ಟ್ರೀಯ ವಿಪತ್ತು ನಿರ್ವಹಣಾ ಸಂಸ್ಥೆ, ಭಾರತ ಸರ್ಕಾರವೂ ನೈಸರ್ಗಿಕ ವಿಕೋಪಗಳ ಕುರಿತು ಮಾಧ್ಯಮ ವರದಿಗಾರರುಗಳಿಗೆ ತಾಂತ್ರಿಕ ಮಾಹಿತಿಯನ್ನೊದಗಿಸಲು ಮತ್ತು ಅವುಗಳನ್ನು ಪರಿಣಾಮಕಾರಿಯಾಗಿ ಜನಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ನೆರವಾಗಲು ಅಗತ್ಯವಿರುವ ತರಬೇತಿ ಕಾರ್ಯಾಗಾರವನ್ನು ಆಯೋಜಿಸಲು ಸಲಹೆ ನೀಡಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರವು ಕರ್ನಾಟಕ ಸರ್ಕಾರ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ನೊಂದಾಯಿತ ಸ್ವಾಯತ್ತ ಸಂಸ್ಥೆಯಾಗಿದ್ದು, ಕರ್ನಾಟಕ ರಾಜ್ಯದಲ್ಲಿ ಸಂಭವನೀಯ ನೈಸರ್ಗಿಕ ವಿಕೋಪಗಳ ಉಸ್ತುವಾರಿ ಜವಾಬ್ದಾರಿಯನ್ನು ಹೊಂದಿದೆ. ಈ ಕೇಂದ್ರವು ರಾಜ್ಯದ ಎಲ್ಲಾ 6000 ಗ್ರಾಮ ಪಂಚಾಯಿತಿಗಳಲ್ಲಿ ದೂರಸ್ಥ ಮಳೆಮಾಪನ ಕೇಂದ್ರಗಳು ಹಾಗೂ ಎಲ್ಲಾ 747 ಹೋಬಳಿ ಕೇಂದ್ರಗಳಲ್ಲಿ ದೂರಸ್ಥ ಹವಾಮಾನ ಮಾಪನ ಕೇಂದ್ರಗಳನ್ನು ಸ್ಥಾಪಿಸಿ ಹವಾಮಾನ ಮುನ್ಸೂಚನೆಯನ್ನೂ ನೀಡುತ್ತಿದೆ. ಈ ಎಲ್ಲಾ ಮಾಹಿತಿ, ಮುನ್ಸೂಚನೆ ಹಾಗೂ ಸಲಹೆಗಳನ್ನು ಜನಸಾಮಾನ್ಯರಿಗೆ ಸಕಾಲದಲ್ಲಿ ತಲುಪಿಸಲು ಹಲವು ಕ್ರಮ ಕೈಗೊಂಡಿದೆ.

ಹೆಚ್ಚಿನ ಮಾಹಿತಿಗಾಗಿ ಡಾ. ಸಿ. ಎನ್. ಪ್ರಭು, ಅವರನ್ನು ಮೊಬೈಲ್ ಸಂಖ್ಯೆ 8762171751 ಮೂಲಕ ಸಂಪರ್ಕಿಸಬಹುದುದಾಗಿದೆ ಈ ಕಾರ್ಯಾಗಾರದಲ್ಲಿ ಪಾಲ್ಗೊಳ್ಳಲು 50 ವರದಿಗಾರರಿಗೆ ಮಾತ್ರ ಅವಕಾಶವಿದ್ದು, ನೊಂದಣಿ ಮಾಡಿಕೊಳ್ಳಲು ಇಮೇಲ್ dmc.kar@gmail.com ಗೆ ಮೇಲ್ ಮಾಡಬಹುದಾಗಿದೆ.

## ಪತ್ರಿಕಾ ಪ್ರಕಟಣೆ

# ಶಿವಶರಣೆ ವಚನಗಾರ್ತಿ ಅಕ್ಕಮಹಾದೇವಿ ಜಯಂತಿ ಹಾಗೂ 'ಅಕ್ಕಮಹಾದೇವಿ ರಾಜ್ಯ ಪ್ರಶಸ್ತಿ' ಪ್ರದಾನ

**ಬೆಂಗಳೂರು, ಏಪ್ರಿಲ್ 10 , (ಕರ್ನಾಟಕ ವಾರ್ತೆ)**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶಿವಶರಣೆ ವಚನಗಾರ್ತಿ ಅಕ್ಕಮಹಾದೇವಿ ಜಯಂತಿ ಹಾಗೂ 'ಅಕ್ಕಮಹಾದೇವಿ ರಾಜ್ಯ ಪ್ರಶಸ್ತಿ' ಪ್ರದಾನ ಸಮಾರಂಭವನ್ನು ಏಪ್ರಿಲ್ 11 ರ ಮಂಗಳವಾರ ಅಪರಾಹ್ನ 12.00 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು – 560 001 ಇಲ್ಲಿ ಹಮ್ಮಿಕೊಂಡಿದೆ.

ಈ ಸಮಾರಂಭದ ಉದ್ಘಾಟನೆ ಹಾಗೂ ಪ್ರಶಸ್ತಿ ಪ್ರದಾನವನ್ನು ಕನ್ನಡ ಮತ್ತು ಸಂಸ್ಕೃತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಶ್ರೀಮತಿ ಉಮಾಶ್ರೀ ಅವರು ನಡೆಸಿಕೊಡಲಿದ್ದಾರೆ.

ಸಮಾರಂಭದ ಮುಖ್ಯ ಅತಿಥಿಯಾಗಿ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಅನಂತಕುಮಾರ್, ನಗರಾಭಿವೃದ್ಧಿ ಮತ್ತು ನಗರ ಯೋಜನೆ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಕೆ.ಜೆ. ಜಾರ್ಜ್, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀಮತಿ ಜಿ. ಪದ್ಮಾವತಿ, ಶ್ರೀಮತಿ ಶಕುಂತಲಾ ಟಿ. ಶೆಟ್ಟಿ, ಶಾಸಕರು, ಪುತ್ತೂರು ವಿಧಾನಸಭಾ ಕ್ಷೇತ್ರ ಹಾಗು ಸಂಸದೀಯ ವ್ಯವಹಾರಗಳ ಕಾರ್ಯದರ್ಶಿ, ಕನ್ನಡ ಸಂಸ್ಕೃತಿ ಇಲಾಖೆ ಅವರುಗಳು ಉಪಸ್ಥಿತರಿರುವರು.

ಸಮಾರಂಭ ಅಧ್ಯಕ್ಷತೆಯನ್ನು ಆರ್.ವಿ ದೇವರಾಜ್, ಅಧ್ಯಕ್ಷರು, ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಲಿ ಹಾಗೂ ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ, ಬೆಂಗಳೂರು ಇವರು ವಹಿಸಲಿರುವ ಈ ಸಮಾರಂಭದಲ್ಲಿ ಅನೇಕ ಗಣ್ಯವ್ಯಕ್ತಿಗಳು ಪಾಲ್ಗೊಳ್ಳಲಿದ್ದಾರೆ.

ಜೆಡಿ:ಜಿಪಿಆರ್.

# ಪ್ರಥಮ, ದ್ವಿತೀಯ ಡಿ.ಇಡಿ ಹಾಗೂ ಪಿ.ಪಿ.ಟಿ ಮುಖ್ಯ ಪರೀಕ್ಷೆಗಳು

**ಬೆಂಗಳೂರು, ಏಪ್ರಿಲ್ 10 , (ಕರ್ನಾಟಕ ವಾರ್ತೆ)**

ಜೂನ್ ಮಾಹೆಯ ಮೊದಲ ವಾರದಲ್ಲಿ ನಡೆಯಲಿರುವ ಪ್ರಥಮ, ದ್ವಿತೀಯ ಡಿ.ಇಡಿ ಹಾಗೂ ಪಿ.ಪಿ.ಟಿ ಮುಖ್ಯ ಪರೀಕ್ಷೆಗಳು ಜೂನ್ 5 ರಿಂದ 12 ರವರೆಗೆ ನಡೆಸಲು ನಿಗಧಿಪಡಿಸಲಾಗಿದೆ.

ಆಯಾ ಡಿ.ಇಡಿ/ಪಿಪಿಟಿ ತರಬೇತಿ ಸಂಸ್ಥೆಗಳಲ್ಲಿ ಪರೀಕ್ಷಾ ಶುಲ್ಕ ಪಾವತಿಸಲು ಏಪ್ರಿಲ್ 24 ಕಡೆಯ ದಿನಾಂಕವಾಗಿದೆ. ನಿಗಧಿತ ದಿನಾಂಕದೊಳಗೆ ಪರೀಕ್ಷಾ ಶುಲ್ಕ ಪಾವತಿಸುವಂತೆ ನಿರ್ದೇಶಕರು (ಇತರೆ ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜೆಡಿ:ಜಿಪಿಆರ್.

# I, II D.Ed & PPT Main Examination

Bengaluru, April 10 (Karnataka Information)

I, II D.Ed & PPT Main Examinations will be held during the first week of June 2017. The dates of Examination is scheduled from 05-06-2017 to 12-06-2017 Students, Parents and Public are here by informed that examination.

Fee will be payable on or before 21.04.2017 in respective Heads of the D.Ed & PPT Institutions. Statement given by Director (Other Exams), Karnataka Secondary Examination Board, Bengaluru.

jd/gpr

## ಬಾಯ್ಲರ್ ಆಪರೇಷನ್ ಇಂಜಿನಿಯರ್ಸ್ ಪರೀಕ್ಷೆಗೆ ಅರ್ಜಿ ಆಹ್ವಾನ

ಬೆಂಗಳೂರು, ಏಪ್ರಿಲ್ 10 (ಕರ್ನಾಟಕ ವಾರ್ತೆ)

**ಬಾಯ್ಲರ್ ಆಪರೇಷನ್ ಇಂಜಿನಿಯರ್ಸ್ ಪರೀಕ್ಷೆಯನ್ನು 2017ರ ಆಗಸ್ಟ್ ತಿಂಗಳಿನಲ್ಲಿ ನಡೆಸಲು ಬಾಯ್ಲರ್ ಆಪರೇಷನ್ ಇಂಜಿನಿಯರ್ಸ್ ಪರೀಕ್ಷಾ ಮಂಡಳಿಯು ನಿರ್ಧರಿಸಿದ್ದು. ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.**

**ಆಸಕ್ತ ಅಭ್ಯರ್ಥಿಗಳು ಪರೀಕ್ಷೆಯ ಅರ್ಜಿ ಮತ್ತು ಅನುಬಂಧಗಳನ್ನು ಕಾರ್ಯದರ್ಶಿಗಳು, ಬಾಯ್ಲರ್ ಆಪರೇಷನ್ ಇಂಜಿನಿಯರ್ಸ್ ಪರೀಕ್ಷಾ ಮಂಡಳಿ, ಕಾರ್ಮಿಕ ಭವನ, 2ನೇ ಮಹಡಿ, ಬನ್ನೇರುಘಟ್ಟ ರಸ್ತೆ, ಬೆಂಗಳೂರು ಇಲ್ಲಿಗೆ ಸಲ್ಲಿಸಲು ಸೂಚಿಸಿದೆ. ಬಾಯ್ಲರ್ ಆಪರೇಷನ್ ಇಂಜಿನಿಯರ್ಸ್ ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿಧಾನ ಹಾಗೂ ಈ ಪರೀಕ್ಷೆಗೆ ಸಂಬಂಧಿಸಿದ ಹೆಚ್ಚಿನ ವಿವರಗಳನ್ನು ಇಲಾಖೆಯ ವೆಬ್‌ಸೈಟ್ www.karnataka.gov.in/surakshate ರಿಂದ ಪಡೆದುಕೊಳ್ಳಬಹುದಾಗಿದೆ ಎಂದು ಕಾರ್ಖಾನೆಗಳ ಬಾಯ್ಲರುಗಳು, ಕೈಗಾರಿಕಾ ಸುರಕ್ಷತೆ ಮತ್ತು ಸ್ವಾಸ್ಥ್ಯ ಇಲಾಖೆ ಪ್ರಕಟಣೆ ತಿಳಿಸಿದೆ.**

# ಪ್ರಥಮ ಮತ್ತು ದ್ವಿತೀಯ ದರ್ಜೆ ಅರ್ಹತಾ ಪ್ರಮಾಣ ಪತ್ರದ ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷೆ

ಬೆಂಗಳೂರು, ಏಪ್ರಿಲ್ 10 (ಕರ್ನಾಟಕ ವಾರ್ತೆ)

ಪ್ರಥಮ ಮತ್ತು ದ್ವಿತೀಯ ದರ್ಜೆ ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷೆಯನ್ನು 2017 ರ ಜುಲೈ ತಿಂಗಳಿನಲ್ಲಿ ನಡೆಸಲು ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷಾ ಮಂಡಳಿಯು ನಿರ್ಧರಿಸಿದೆ.

ಸದರಿ ಪರೀಕ್ಷೆಗೆ ವಿವಿಧ ಜಿಲ್ಲೆಗಳಿಂದ ಬರುವ ಅರ್ಜಿಗಳ ಸಂಖ್ಯೆಗಳ ಆಧಾರದ ಮೇಲೆ ಪರೀಕ್ಷಾ ಸ್ಥಳ ಮತ್ತು ದಿನಾಂಕಗಳನ್ನು ನಿಗಧಿಪಡಿಸಿ ಅಭ್ಯರ್ಥಿಗಳಿಗೆ ತಿಳಿಸಲಾಗುತ್ತದೆ.

ಆಸಕ್ತ ಅಭ್ಯರ್ಥಿಗಳು ಪರೀಕ್ಷೆಯ ಅರ್ಜಿ ಮತ್ತು ಅನುಬಂಧಗಳನ್ನು ಕಾರ್ಯದರ್ಶಿಗಳು, ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷಾ ಮಂಡಳಿ, ಕಾರ್ಮಿಕ ಭವನ, 2ನೇ ಮಹಡಿ, ಬನ್ನೇರುಘಟ್ಟ, ಬೆಂಗಳೂರು ಇಲ್ಲಿಗೆ ಸಲ್ಲಿಸಬಹುದಾಗಿದೆ.

ಬಾಯ್ಲರ್ ಅಟೆಂಡೆಂಟ್ಸ್ ಪರೀಕ್ಷೆಗೆ ಅರ್ಜಿ ಸಲ್ಲಿಸುವ ವಿಧಾನ ಹಾಗೂ ಈ ಪರೀಕ್ಷೆಗೆ ಸಂಬಂಧಿಸಿದ ಹೆಚ್ಚಿನ ವಿವರಗಳನ್ನು ಇಲಾಖೆಯ ವೆಬ್‌ಸೈಟ್ **www.karnataka.gov.in/surakshate** ರಿಂದ ಪಡೆದುಕೊಳ್ಳಬಹುದಾಗಿದೆ.

ಎಸ್‌ಎಂ:ಜೆಡಿ:ಜಿಪಿಆರ್.

## ಜೂನ್ 15 ರವರೆಗೆ ಕುಡಿಯುವ ನೀರಿಗೆ ತೊಂದರೆ ಇಲ್ಲ – ಎಂ.ಬಿ. ಪಾಟೀಲ್

ಬೆಂಗಳೂರು, ಏಪ್ರಿಲ್ 10 (ಕರ್ನಾಟಕ ವಾರ್ತೆ)

ರಾಜ್ಯವು ತೀವ್ರ ಬರಗಾಲ ಎದುರಿಸುತ್ತಿರುವ ಹಿನ್ನಲೆಯಲ್ಲಿ ಈಗಿರುವ ರಾಜ್ಯದ ಎಲ್ಲಾ ಜಲಾಶಯಗಳಲ್ಲಿ ಉಳಿದಿರುವ ನೀರನ್ನು ಕುಡಿಯಲು ಮಾತ್ರ ಬಳಕೆ ಮಾಡಲು ಸರ್ಕಾರ ನಿರ್ಧಾರ ಕೈಗೊಂಡಿದೆ ಎಂದು ಜಲಸಂಪನ್ಮೂಲ ಸಚಿವ ಎಂ.ಬಿ. ಪಾಟೀಲ್ ಅವರು ತಿಳಿಸಿದರು.

ವಿಧಾನ ಸೌಧದ ತಮ್ಮ ಕಛೇರಿಯಲ್ಲಿ ಇಂದು ಇಲಾಖೆಯ ಉನ್ನತಮಟ್ಟದ ಅಧಿಕಾರಿಗಳ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಆಲಮಟ್ಟಿ, ನಾರಾಯಣಪುರ, ಹಿಡಕಲ್, ಹಿಪ್ಪರಗಿ, ಮಲಪ್ರಭ, ತುಂಗಭದ್ರಾ, ಸಿಂಗಟಾಲೂರು ಏತನೀರಾವರಿ, ಕಬಿನಿ ಮತ್ತು ಕೆ.ಆರ್.ಎಸ್. ನೀರನ್ನು ಸಂಪೂರ್ಣವಾಗಿ ಕುಡಿಯುವ ನೀರಿಗೆ ಬಳಕೆ ಮಾಡುವಂತೆ ಇಲಾಖೆಯ ಹಿರಿಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಜನರು ಕುಡಿಯುವ ನೀರಿಗಾಗಿ ಆತಂಕ ಪಡುವ ಅಗತ್ಯ ಇಲ್ಲ ಎಂದ ಸಚಿವ ಎಂ.ಬಿ. ಪಾಟೀಲ್ ಅವರು ಜೂನ್ 15 ರವರೆಗೆ ಬೆಂಗಳೂರು ನಗರ ಸೇರಿದಂತೆ ಎಲ್ಲಾ ಪ್ರದೇಶಗಳಲ್ಲಿ ಕುಡಿಯುವ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡಲು ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ರೈತ ಸಮುದಾಯದವರಲ್ಲಿ ಕಳಕಳಿಯ ವಿನಂತಿ ಏನೆಂದರೆ ರಾಜ್ಯದಲ್ಲಿ ತೀವ್ರ ಬರಗಾಲ ಇರುವ ಹಿನ್ನೆಲೆಯಲ್ಲಿ ಜಲಾಶಯಗಳ ನೀರನ್ನು ಕೃಷಿ ಚಟುವಟಿಕೆಗಳಿಗೆ ಬಳಸದಿರುವಂತೆ ಈ ಸಂದರ್ಭದಲ್ಲಿ ಮನವಿ ಮಾಡಿದರು.

ಕೆಪಿಪಿ/ಕೆಎಂ

## ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಮಾಸಿಕ ರೂ. 8000 ಕ್ಕೆ ಹೆಚ್ಚಳ

ಬೆಂಗಳೂರು, ಏಪ್ರಿಲ್ 10 (ಕರ್ನಾಟಕ ವಾರ್ತೆ)

ಅಂಗನವಾಡಿ ಕಾರ್ಯಕರ್ತರ ಬಹುದಿನಗಳ ಬೇಡಿಕೆ ಹಾಗೂ ಈ ಸಂಬಂಧ ಧರಣಿ ನಿರತರಾಗಿದ್ದಾಗ ನೀಡಿದ ಭರವಸೆಯಂತೆ ಈ ಸಾಲಿನ ಆಯವ್ಯಯದಲ್ಲಿ ರೂ. 1000 ಹಾಗೂ ಹೆಚ್ಚುವರಿಯಾಗಿ 1,000 ರೂ.ಗಳನ್ನು ಹೆಚ್ಚಿಸಲು ಸರ್ಕಾರ ತೀರ್ಮಾನ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ಪ್ರಕಟಿಸಿದರು.

ವಿಧಾನ ಸಮಿತಿ ಕೊಠಡಿಯಲ್ಲಿ ಇಂದು ನಡೆದ ವಿವಿಧ ಸಮಿತಿಗಳ ಪದಾಧಿಕಾರಿಗಳು ಹಾಗೂ ಅಧಿಕಾರಿಗಳ ಸಭೆಯ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ನಾಲ್ಕು ವರ್ಷದ ಅವಧಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ 4650 ರೂ. ಗಳ ಗೌರವಧನ ಹೆಚ್ಚಿಸಿದೆ ಎಂದ ಮುಖ್ಯಮಂತ್ರಿ ಈ ಹಿಂದೆ ಕೇಂದ್ರ ಸರ್ಕಾರ 90:10 ರ ಅನುಪಾತದ ಬದಲು ಹಾಗೂ 60:40 ರ ಅನುಪಾತದ ಅಡಿ ಗೌರವಧನವನ್ನು ನೀಡುತ್ತಿದೆ. ಇದರಿಂದಾಗಿ ಅಂಗನವಾಗಿ ಕಾರ್ಯಕರ್ತೆಯರ ಹಾಗೂ ಸಹಾಯಕಿಯರ ಗೌರವಧನ ಏರಿಕೆ ಮಾಡಲಾಗಿಲ್ಲ. ಅವರ ಬೇಡಿಕೆ ಸಮಂಜಸವಾಗಿದ್ದರೂ ರಾಜ್ಯ ಸರ್ಕಾರ ತನ್ನ ಇತಿ ಮಿತಿಯೊಳಗೆ ದೊಡ್ಡ ಪ್ರಮಾಣದಲ್ಲಿ ಇಂದು ಗೌರವಧನವನ್ನು ಹೆಚ್ಚಿಸಿದೆ ಎಂದರು.

ಮಿನಿ ಅಂಗನವಾಡಿ ಕಾರ್ಯಕರ್ತೆಯರಿಗೂ ಹಾಲಿ ಇರುವ ಮಾಸಿಕ ಗೌರವಧನದ ಜೊತೆಗೆ 500 ರೂ.ಗಳ ಗೌರವಧನವನ್ನು ಸರ್ಕಾರ ಹೆಚ್ಚಿಸಿದೆ ಎಂದು ತಿಳಿಸಿದರು. ಸಭೆಯಲ್ಲಿ ವಿವಿಧ ಸಂಘಟನೆಗಳ ಮುಖಂಡರು ಸರ್ಕಾರದ ನಿರ್ಧಾರವನ್ನು ಸ್ವಾಗತಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಉಮಾಶ್ರೀ ಸರ್ಕಾರದ ವಿಧಾನ ಪರಿಷತ್ ಸದಸ್ಯ ಎಚ್.ಎಂ. ರೇವಣ್ಣ, ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ಐ.ಎಸ್.ಎನ್. ಪ್ರಸಾದ್, ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳಾದ ಎಲ್.ಕೆ. ಅತೀಖ್, ತುಷಾರ್ ಗಿರಿನಾಥ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಉಮಾ ಮಹದೇವನ್ ಹಾಗೂ ವಿವಿಧ ಸಂಘಟನೆಗಳ ಮುಖ್ಯಸ್ಥರು ಸಭೆಯಲ್ಲಿ ಭಾಗವಹಿಸಿದ್ದರು.

ಕೆಪಿಪಿ/ಕೆಎಂ

## ಪಿಂಕ್ ಹೊಯ್ಸಳ ಗಸ್ತು ವಾಹನಗಳ ಉದ್ಘಾಟನೆ ಹಾಗೂ ಸುರಕ್ಷಾ ಆ್ಯಪ್ ನ ಲೋಕಾರ್ಪಣೆ

ಬೆಂಗಳೂರು, ಏಪ್ರಿಲ್ 10 (ಕರ್ನಾಟಕ ವಾರ್ತೆ)

ಬೆಂಗಳೂರು ನಗರದಲ್ಲಿ ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳ ಸುರಕ್ಷತೆ ದೃಷ್ಟಿಯಿಂದ 51 ಹೊಸ ಪಿಂಕ್ ಹೊಯ್ಸಳ ಗಸ್ತು ವಾಹನವನ್ನು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಾರ್ಪಣೆ ಮಾಡಿದರು.

ವಿಧಾನ ಸೌಧದ ಮುಂಭಾಗದಲ್ಲಿ ಒಳಾಡಳಿತ ಇಲಾಖೆ ಇಂದು ಏರ್ಪಡಿಸಿದ್ದ ಪಿಂಕ್ ಹೊಯ್ಸಳ ವಾಹನಗಳ ಉದ್ಘಾಟನೆ ಹಾಗೂ ಬೆಂಗಳೂರು ನಗರ ಪೊಲೀಸ್ ಸುರಕ್ಷಾ ಆ್ಯಪ್‌ಗೆ ಹಸಿರು ನಿಶಾನೆ ತೋರಿಸಿ ಮಾತನಾಡಿದ ಮುಖ್ಯಮಂತ್ರಿಗಳು ನಗರದಲ್ಲಿ ಪೊಲೀಸರ ಸುರಕ್ಷಾ ಆ್ಯಪ್ ಕಾರ್ಯ ವೈಖರಿ ನೋಂದಾಯಿಸುವ ಮೊಬೈಲ್ ಸಂಖ್ಯೆಯನ್ನು ತುರ್ತು ಸಹಾಯದ ಕೋರಿಕೆಯನ್ನು ಕಮಾಂಡೆರ್ ಸೆಂಟರ್ ಸ್ವೀಕರಿಸಿ ತಕ್ಷಣ ತುರ್ತು ಪರಿಸ್ಥಿತಿಯಲ್ಲಿರುವ ವ್ಯಕ್ತಿಯ ಸ್ಥಳವನ್ನು ಗುರುತಿಸಿ ತಕ್ಷಣವೇ ಎಚ್ಚರಿಕೆ ಸಂದೇಶ ರವಾನಿಸುವ ಆ್ಯಪ್ ಇದಾಗಿದೆ ಎಂದರು.

ಇತ್ತೀಚೆಗೆ ಮಹಿಳೆಯರ ಮೇಲೆ ದೌರ್ಜನ್ಯಗಳು ಸರಗಳ್ಳತನ ಹಾಗೂ ಇತರೆ ಅಪರಾಧಗಳು ನಡೆಯುತ್ತಿರುತ್ತಿವೆ. ಪೊಲೀಸ್ ಇಲಾಖೆ ಇಂತಹ ಕೃತ್ಯಗಳನ್ನು ತಕ್ಷಣ ಬೇಧಿಸಲು ಈ ಆ್ಯಪ್ ಕೆಲಸ ಮಾಡುತ್ತದೆ ಎಂದ ಮುಖ್ಯಮಂತ್ರಿಗಳು ಪೊಲೀಸ್ ಇಲಾಖೆಯ ಎಲ್ಲಾ ಅಧಿಕಾರಿಗಳು ದಕ್ಷತೆಯಿಂದ ಕೆಲಸ ಮಾಡಿದಲ್ಲಿ ನಗರ ಪ್ರದೇಶಗಳಲ್ಲಿನ ಅಪರಾಧಗಳ ಸಂಖ್ಯೆ ಗಣನೀಯವಾಗಿ ಕಡಿಮೆಯಾಗುತ್ತದೆ ಎಂದರು.

ಇತ್ತೀಚಿಗೆ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಕೆಲಸ ಮಾಡುತ್ತಿದ್ದರೂ ಅಪರಾಧಗಳು ಕಡಿಮೆಯಾಗುತ್ತಿಲ್ಲ. ಈಗಾದಲ್ಲಿ ಏನೂ ಪ್ರಯೋಜನವಾಗದು ಎಂದ ಮುಖ್ಯಮಂತ್ರಿಗಳು, ಪೊಲೀಸ್ ಇಲಾಖೆ ಸಿಬ್ಬಂದಿ ಜನರ ವಿಶ್ವಾಸಗಳಿಸಿ ಕಾರ್ಯನಿರ್ವಹಿಸಬೇಕು ಎಂದರು. ಮಹಿಳೆಯರ ಸುರಕ್ಷತೆಗಾಗಿ ಸರ್ಕಾರ ಆದ್ಯತೆ ಮೇಲೆ ಕೆಲಸ ನಿರ್ವಹಿಸುತ್ತಿದೆ. ಅಪರಾಧಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು.

ಕೆಪಿಪಿ/ಕೆಎಂ